ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಹೆಚ್ಚುವರಿ ಪ್ರಮಾಣ ಪತ್ರವನ್ನು ನನ್ನ ಮುಂದುವರೆದ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಹೆಚ್ಚುವರಿ ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಒಂದು ಆಕಾರ್ ಬಂದ್ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-19 ಎಂದು, ಒಂದು ಗ್ರಾಮ ನಕಾಶೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-20 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಪ್ರತಿವಾದಿ ಪರ ವಕೀಲರಿಂದಃ-

ಪ್ರತಿವಾದಿಗಳು ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದು, ಪ್ರತಿವಾದಿಗಳು ಲಿಖಿತ ಹೇಳಿಕೆ ಸಲ್ಲಿಸದ ಕಾರಣ ಈ ಸಾಕ್ಷಿಯ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.